# Akashvani : Bangalore
# Regional Bulletin In Kannada
# 20.02.2026 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ನಾಳೆಯಿಂದ ಬಂಡೀಪುರದಲ್ಲಿ ಷರತ್ತುಬದ್ಧ ಸಫಾರಿ ಆರಂಭ ; ಸಚಿವ ಈಶ್ವರ ಬಿ. ಖಂಡ್ರೆ ಸ್ಪಷ್ಟನೆ

೨. ಮಂಡ್ಯ ಜಿಲ್ಲೆಗೆ ಕನಿಷ್ಠ ಎರಡು ಕೈಗಾರಿಕೆ ತರಲು ಬದ್ಧ - ಕೇಂದ್ರ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ

೩. ಪರಿಶಿಷ್ಟ ಸಂಘಟನೆಗಳ ಮುಖಂಡರೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಪೂರ್ವ ಸಮಾಲೋಚನೆ

೪. ಬೆಂಗಳೂರಿನ ವಿವಿಧ ಸಂಸ್ಥೆಗಳಿಗೆ ಭೇಟಿ ನೀಡಿದ ನೆದರ್‌ಲ್ಯಾಂಡ್ ಪ್ರಧಾನಿ ಡಿಕ್‌ಶೂಫ್

೫. ಸರ್ಕಾರದ ಮುಖ್ಯ ಕಾರ್ಯದರ್ಶಿ ವಿರುದ್ಧ ಲಂಚ ಆರೋಪ ಸಾಮಾಜಿಕ ಹೋರಾಟಗಾರ ಸ್ನೇಹಮಹಿ ಕೃಷ್ಣ ಬಂಧನ

**<><*<><>*><>**

ಮಾನವ-ಹುಲಿ ಸಂಘರ್ಷದ ಹಿನ್ನೆಲೆಯಲ್ಲಿ ಸ್ಥಗಿತಗೊಳಿಸಲಾಗಿದ್ದ ಬಂಡೀಪುರ ಸಫಾರಿಯನ್ನು ನಾಳೆಯಿಂದ ಷರತ್ತುಬದ್ಧವಾಗಿ ಪುನಾರಂಭಿಸಲು ನಿರ್ಧರಿಸಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ. ಮೈಸೂರಿನಲ್ಲಿಂದು ಮೈಸೂರು, ಕೊಡಗು ಮತ್ತು ಚಾಮರಾಜನಗರ ವಿಭಾಗದ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ನಾಳೆಯಿಂದ ಸಫಾರಿ ಆರಂಭಿಸಲು ಅಧಿಕೃತ ಆದೇಶ ಹೊರಡಿಸಲಾಗುವುದು ಎಂದು ಹೇಳಿದ್ದಾರೆ. ಈ ಆದೇಶದಲ್ಲಿರುವ ಷರತ್ತುಗಳ ಉಲ್ಲಂಘನೆಯಾದರೆ, ಸಂಬಂಧಿತ ಅಧಿಕಾರಿಗಳನ್ನೇ ಹೊಣೆ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಈ ಮೊದಲು ಬಳಕೆಯಾಗುತ್ತಿದ್ದ ಸಫಾರಿ ವಾಹನಗಳ ಶೇಕಡ ೫೦ರಷ್ಟು ವಾಹನ ಮತ್ತು ಸಿಬ್ಬಂದಿ ಮಾತ್ರವೇ ಬಳಕೆ ಮಾಡಬೇಕು. ಹೆಚ್ಚಾಗಿ ಬಸ್ ಗಳ ಮೂಲಕ ಸಫಾರಿ ನಡೆಸಬೇಕು. ಅತ್ಯಂತ ಕಡಿಮೆ ಸಂಖ್ಯೆಯಲ್ಲಿ  ಕ್ಯಾಂಪರ್ ಮತ್ತು ಜೀಪ್ ಬಳಕೆ ಮಾಡಬೇಕು ಎಂದು ತಿಳಿಸಿದ್ದಾರೆ. ಬಂಡಿಪುರ ಮತ್ತು ನಾಗರಹೊಳೆ ಅರಣ್ಯ ಪ್ರದೇಶದಲ್ಲಿ ಮಾನವ-ವನ್ಯಜೀವಿ ಸಂಘರ್ಷ ಇರುವ ಪ್ರದೇಶವನ್ನು ಗುರುತಿಸಬೇಕು. ಆ ಪ್ರದೇಶದಲ್ಲಿ ಗಸ್ತು ಹೆಚ್ಚಿಸಬೇಕು. ವನ್ಯಜೀವಿಗಳು ವಸತಿ ಪ್ರದೇಶಕ್ಕೆ ಬಾರದಂತೆ, ಜೀವಹಾನಿ, ಬೆಳೆ ಹಾನಿ ಮಾಡದಂತೆ ಎಚ್ಚರಿಕೆ ವಹಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ಇದೇ ವೇಳೆ ಮೈಸೂರಿನ ರಸ್ತೆಯ ಬದಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಸಿಗಳನ್ನು ನೆಟ್ಟು ಹಸಿರು ಹೊದಿಕೆ ಹೆಚ್ಚಿಸುವಂತೆ ಹಾಗೂ ವೃಕ್ಷ ಸಂರಕ್ಷಣೆ ಮತ್ತು ವೃಕ್ಷ ಸಂವರ್ಧನೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಅರಣ್ಯಾಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

**<><*<><>*><>**

ಮಂಡ್ಯ ಜಿಲ್ಲೆಗೆ ಕನಿಷ್ಠ ಎರಡು ಕೈಗಾರಿಕೆಗಳನ್ನು ತರುವುದಾಗಿ ಕೇಂದ್ರ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಘೋಷಿಸಿದ್ದಾರೆ. ಆದಿಚುಂಚನಗಿರಿಯಲ್ಲಿ ಖ್ಯಾತ ವಿಜ್ಞಾನಿ ಡಾ.ಎಂ.ಕೆ.ಸೂರಪ್ಪ ಅವರಿಗೆ ವಿಜ್ಞಾತಂ-೨೦೨೬ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು, ಮಂಡ್ಯ ಜಿಲ್ಲೆಯಲ್ಲಿ ಅಭಿವೃದ್ಧಿ ಪಥದತ್ತ ಕೊಂಡೊಯ್ಯೋಣ ಎಂದು ತಿಳಿಸಿದ್ದಾರೆ. ೫೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಮಂಡ್ಯ ಜಿಲ್ಲೆಗೆ ಆಟೊಮೋಟಿವ್ ರಿಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ ಕೇಂದ್ರವನ್ನು ತರಲಾಗುವುದು. ಇದು ಮಂಡ್ಯ ಜಿಲ್ಲೆಯ ಚಿತ್ರಣವನ್ನೆ ಬದಲಿಸಲಿದೆ ಎಂದು ಹೇಳಿದ್ದಾರೆ. ಭದ್ರಾವತಿಯಲ್ಲಿನ ವಿಶ್ವೇಶ್ವರಯ್ಯ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಯನ್ನು ಪುನಶ್ಚೇತನಗೊಳಿಸಿ ಆರಂಭಿಕ ಹಂತದಲ್ಲಿ ಕನಿಷ್ಠ ೫ ಸಾವಿರ ಕೋಟಿ ರೂಪಾಯಿ ಹೂಡಿಕೆ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

**<><*<><>*><>**

ಮಾರ್ಚ್ ೬ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ೨೦೨೬-೨೭ನೇ ಸಾಲಿನ ಆಯ-ವ್ಯಯ ಮಂಡಿಸಲಿದ್ದಾರೆ.  ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಪರಿಶಿಷ್ಟ ಸಂಘಟನೆಗಳ ಮುಖಂಡರೊಂದಿಗೆ ಚರ್ಚೆ ನಡೆಸಿದರು. ಈ ವೇಳೆ ಸಮಾಜಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ

ಅಜುಂ ಪರ್ವೇಜ್ ಉಪಸ್ಥಿತರಿದ್ದರು. ಇದಕ್ಕೂ ಮೊದಲು ಅವರು ಆರ್ಥಿಕ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಆಯ-ವ್ಯಯ ಪೂರ್ವ ಸಮಾಲೋಚನೆ ನಡೆಸಿದರು.

<><*<><>*><>

ಉತ್ತಮ ಸಮಾಜ ನಿರ್ಮಾಣ ಮಾಡುವಲ್ಲಿ ಪುರಾತನ ಕಾಲದ ಗುರುಕುಲಗಳು ಇಂದಿಗೂ ಮಾದರಿಯಾಗಿವೆ ಎಂದು ಕೇಂದ್ರ ವಿತ್ತ ಸಚಿವೆ ನಿರ್ಮಲ ಸೀತಾರಾಮನ್ ಅಭಿಪ್ರಾಯಪಟ್ಟಿದ್ದಾರೆ. ರಾಮನಗರ ಸಮೀಪದ ಬನ್ನಿ ಕುಪ್ಪೆ ಗ್ರಾಮದಲ್ಲಿ ನೂತನ ಗುರುಕುಲ ಕಾಮಗಾರಿಗೆ ಶಂಕು ಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಮಕ್ಕಳಿಗೆ ರಾಷ್ಟ್ರದ ಬಗ್ಗೆ ಧರ್ಮದ ಬಗ್ಗೆ ಉತ್ತಮ ಶಿಕ್ಷಣವನ್ನು ನೀಡುವಲ್ಲಿ ಗುರುಕುಲಗಳು ಮಹತ್ತರವಾದ ಕೆಲಸಗಳನ್ನು ಮಾಡುತ್ತಿವೆ ಎಂದು ಹೇಳಿದ್ದಾರೆ. ಗ್ರಾಮೀಣ ಭಾಗದಲ್ಲಿ ಗುರುಕುಲಗಳು ಸ್ಥಾಪನೆಯಾಗುತ್ತಿರುವುದು ಶ್ಲಾಘನೀಯ ಎಂದು ತಿಳಿಸಿದ್ದಾರೆ.

<><*<><>*><>

ಬೆಂಗಳೂರು ಭೇಟಿಗಾಗಿ ನೆದರ್‌ಲ್ಯಾಂಡ್ ಪ್ರಧಾನಿ ಡಿಕ್‌ಶೂಫ್ ಇಂದು ಬೆಂಗಳೂರಿಗೆ ಆಗಮಿಸಿದರು. ಈ ವೇಳೆ ಅವರು, ಬೆಂಗಳೂರಿನ ಆರ್‌ಟಿ ನಗರದಲ್ಲಿರುವ ಫಿಲಿಪ್ಸ್ ಇನ್ನೋವೇಷನ್ ಕ್ಯಾಂಪಸ್, ಬೆಂಗಳೂರು ಸಂಚಾರ ಪೊಲೀಸ್ ನಿಯಂತ್ರಣಾ ಕೇಂದ್ರಕ್ಕೆ ಹಾಗೂ ಭಾರತೀಯ ವಿಜ್ಞಾನ ಸಂಸ್ಥೆಗೆ ಭೇಟಿ ನೀಡಿದರು. ಬಳಿಕ ಬೆಂಗಳೂರಿನ ಉದ್ಯಮಿಗಳೊಂದಿಗೆ ಭೋಜನ ಸಭೆ ನಡೆಸಿ ನಿರ್ಗಮಿಸಿದ್ದಾರೆ. ಬೆಂಗಳೂರು ಭೇಟಿಗಾಗಿ ಆಗಮಿಸಿದ್ದ ಡಿಕ್‌ಶೂಫ್ ಅವರನ್ನು ವಿಮಾನ ನಿಲ್ದಾಣದಲ್ಲಿ ಸಚಿವ ಕೃಷ್ಣ ಬೈರೇಗೌಡ ಹಾಗೂ ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್, ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್, ಮೈಸೂರು ಸ್ಯಾಂಡಲ್ ಉತ್ಪನ್ನಗಳನ್ನು ನೀಡಿ ಬೀಳ್ಕೊಟ್ಟರು.

<><*<><>*><>

ರಾಜ್ಯ ಸರ್ಕಾರ ಮಹಿಳಾ ಕೇಂದ್ರೀಕೃತ ಯೋಜನೆಗಳ ಮೂಲಕ ಅವರ ಸ್ವಾಭಿಮಾನದ ಬದುಕಿಗೆ ನೆರವಾಗುತ್ತಿದೆ ಎಂದು ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಮಂಗಳೂರಿನಲ್ಲಿ ನಡೆಯುತ್ತಿರುವ ರಾಷ್ಟ್ರ ಮಟ್ಟದ 'ಸರಸ್ ಮೇಳ' ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರ ಮಹಿಳಾ ಕೇಂದ್ರಿತ ಯೋಜನೆಗಳಿಗೆ ಒತ್ತು ನೀಡಿದೆ ಎಂದು ಹೇಳಿದ್ದಾರೆ. ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ಗ್ರಾಮೀಣ ಮಹಿಳೆಯರಿಗೆ ಶಕ್ತಿ ತುಂಬುವ ಈ ಮೇಳ ವ್ಯಾಪಾರದ ವೇದಿಕೆ ಮಾತ್ರವಲ್ಲ, ಸ್ವಸಹಾಯ ಸಂಘಗಳ ಶಕ್ತಿ, ಸ್ವಾವಲಂಬನೆಯ ಶಕ್ತಿ ತೋರಿಸುವ ಕಾರ್ಯಕ್ರಮ ಎಂದು ತಿಳಿಸಿದ್ದಾರೆ.

<><*<><>*><>

ಅಧಿಕಾರಿಯೊಬ್ಬರ ವರ್ಗಾವಣೆ ವಿಚಾರದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಲಂಚ ಪಡೆದಿದ್ದಾರೆ ಎಂದು ಆರೋಪಿಸಿದ್ದ ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ ಅವರನ್ನು ಬೆಂಗಳೂರಿನಲ್ಲಿ ಬಂಧಿಸಲಾಗಿದೆ. ಅಧಿಕಾರಿ ಸಲ್ಲಿಸಿದ್ದ ದೂರಿನ ಹಿನ್ನೆಲೆಯಲ್ಲಿ ಪೊಲೀಸರು ಅವರನ್ನು ಬಂಧಿಸಿದ್ದಾರೆ. ಈ ನಡುವೆ ಬೆಂಗಳೂರಿನ ಸಿಸಿಬಿ ಅಧಿಕಾರಿಗಳು ಮೈಸೂರಿನ ಅವರ ನಿವಾಸದ ಮೇಲೆ ದಾಳಿ ನಡೆಸಿದ್ದಾರೆ. ಹತ್ತುಕ್ಕೂ ಹೆಚ್ಚು ಅಧಿಕಾರಿಗಳನ್ನೊಳಗೊಂಡ ತಂಡ ಶೋಧ ಕಾರ್ಯ ನಡೆಸಿ, ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳು ಹಾಗೂ ಇತರೆ ಮಾಹಿತಿಗಳನ್ನು ಪರಿಶೀಲನೆ ನಡೆಸಿದ್ದಾರೆ. ಅಲ್ಲದೇ ಅವರ ಕುಟುಂಬಸ್ಥರ ವಿಚಾರಣೆಯನ್ನು ನಡೆಸಿದ್ದಾರೆ.

<><*<><>*><>

ದೆಹಲಿಯಲ್ಲಿ ನಡೆಯುತ್ತಿರುವ ಎಐ ಇಂಪ್ಯಾಕ್ಟ್ ಸಮ್ಮೇಳನದಲ್ಲಿ ಕರ್ನಾಟಕ ಎಐ ಚಾಲಿತ ವೈಯಕ್ತಿಕ ಕಂಪ್ಯೂಟರ್, ಕೇಇಒ ಅನ್ನು ಪ್ರದರ್ಶಿಸಿದೆ ಎಂದು ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಇದನ್ನು ಸರ್ಕಾರಿ ಸ್ವಾಮ್ಯದ ಉದ್ಯಮ ಕಿಯೋನಿಕ್ಸ್ ಸೆಮಿಕಂಡಕ್ಟರ್ ಪಾಲುದಾರರು ಮತ್ತು ಸಿಸ್ಟಮ್ ಇಂಟಿಗ್ರೇಟರ್‌ಗಳ ಜೊತೆಗೂಡಿ ವಿನ್ಯಾಸಗೊಳಿಸಲಾಗಿದೆ ಎಂದು ಹೇಳಿದ್ದಾರೆ. ರಾಜ್ಯದ ನವೋದ್ಯಮ ಮತ್ತು ನಾವೀನ್ಯತೆ ಇಕೊ ಸಿಸ್ಟಮ್ ಬಲಪಡಿಸಲು ಹಾಗೂ ಅದರ ಜಾಗತಿಕ ಸಂಪರ್ಕಗಳನ್ನು ಗಾಢವಾಗಿಸಲು ಮಾಹಿತಿ ತಂತ್ರಜ್ಞಾನ ಇಲಾಖೆಯು ಲಿಂಕ್ ಇನ್ನೋವೇಷನ್ಸ್ ಜೊತೆ ಒಪ್ಪಂದ ಮಾಡಿಕೊಂಡಿದೆ ಎಂದು ಹೇಳಿದ್ದಾರೆ. ಈ ನಡುವೆ ಸಚಿವ ಪ್ರಿಯಾಂಕ್ ಖರ್ಗೆ, ಕರ್ನಾಟಕ, ಫ್ರಾನ್ಸ್ ಸಹಯೋಗ ಬಲಗೊಳಿಸಲು ಬಿಸಿನೆಸ್ ಫ್ರಾನ್ಸ್‌ನೊಂದಿಗೆ ದುಂಡುಮೇಜಿನ ಸಭೆಯಲ್ಲಿ ಭಾಗವಹಿಸಿದ್ದು, ಹೂಡಿಕೆ ಮತ್ತು ಸಹ ನಾವೀನ್ಯತೆ ಕುರಿತಂತೆ ಚರ್ಚೆ ನಡೆಸಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಪಂಚಗ್ಯಾರಂಟಿಗಳ ಸಮರ್ಥ ಜಾರಿಯಿಂದ ಸರ್ಕಾರ ಹೊಸ ದಾಖಲೆಗಳನ್ನು ನಿರ್ಮಿಸಿದೆ ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ತಿಳಿಸಿದ್ದಾರೆ. ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಕ್ಷೇತ್ರ ಪ್ರಚಾರದ ಎಲ್‌ಇಡಿ ವಾಹನಕ್ಕೆ ಚಾಲನೆ ನೀಡಿ, ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳು ಗ್ರಾಮೀಣ ಹಾಗೂ ನಗರ ಪ್ರದೇಶಗಳ ಜನರ ಜೀವನದ ಮೇಲೆ ಉತ್ತಮ ಪರಿಣಾಮ ಬೀರಿದೆ ಎಂದು ಹೇಳಿದ್ದಾರೆ.

<><*<><>*><>

ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಸರ್ಕಾರ ದಿವಾಳಿಯಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸುಪ್ರೀಂಕೋರ್ಟ್ ಗ್ಯಾರಂಟಿ ಯೋಜನೆಗಳ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿರುವುದನ್ನು ಸ್ವಾಗತಿಸಿದ್ದಾರೆ. ಸರ್ಕಾರಿ ಆಸ್ಪತ್ರೆಯಲ್ಲಿ ಸಿಟಿ ಹಾಗೂ ಎಂಆರ್ಐ ಸೇವೆಗಳಿಗೆ ೧೨೦ ಕೋಟಿ ರೂಪಾಯಿ ಬಾಕಿ ಉಳಿಸಿಕೊಳ್ಳಲಾಗಿದೆ. ಸಾರಿಗೆ ನೌಕರರಿಗೆ ವೇತನ ನೀಡಲು, ದುಡ್ಡಿಲ್ಲ ಎಂದು ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇದೇ ವೇಳೆ ಬಾಗಲಕೋಟೆಯಲ್ಲಿ ಶಿವಾಜಿ ಮೆರವಣಿಗೆ ವೇಳೆ ನಡೆದ ಕಲ್ಲು ತೂರಾಟವನ್ನು ಅವರು ಖಂಡಿಸಿದ್ದಾರೆ.

<><*<><>*><>

ಸಂಜೀವಿನಿ-ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ, ಕೌಶಲಾಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆ, ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ವಿಜಯನಗರ ಇವುಗಳ ಸಂಯುಕ್ತಾಶ್ರಯದಲ್ಲಿ ಹೊಸಪೇಟೆಯ ವಿಜಯನಗರ ಕಾಲೇಜು ಆವರಣದಲ್ಲಿ ನಾಳೆ ಉದ್ಯೋಗ ಮೇಳ ಆಯೋಜಿಸಲಾಗಿದೆ. ಜಿಲ್ಲೆಯ ನಿರುದ್ಯೋಗಿ ಯುವಕ, ಯುವತಿಯರು ಮತ್ತು ಯುವನಿಧಿ ಫಲಾನುಭವಿಗಳಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ಮೇಳ ಆಯೋಜಿಸಲಾಗಿದೆ. ಮೇಳದಲ್ಲಿ ೫೦ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಭಾಗವಹಿಸಲಿದ್ದು, ೨ ಸಾವಿರಕ್ಕೂ ಹೆಚ್ಚು ವಿವಿಧ ಹುದ್ದೆಗಳ ಉದ್ಯೋಗಾವಕಾಶ ಸಿಗಲಿದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಜನಸಾಮಾನ್ಯರಿಗೆ ಅರ್ಥವಾಗುವ ಸರಳ ಭಾಷೆ ಮತ್ತು ಪದಗಳಲ್ಲಿ ತ್ರಿಪದಿಗಳನ್ನು ಹೇಳುವ ಮೂಲಕ ಸಾಮಾಜಿಕ ಅಂಧಕಾರವನ್ನು ಹೋಗಲಾಡಿಸಿ ಸಮಾಜವನ್ನು ತಿದ್ದುವಲ್ಲಿ ಸರ್ವಜ್ಞ ಶ್ರಮಿಸಿದ್ದರು ಎಂದು ಕರಾವಳಿ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಂ. ಎ ಗಫೂರ್ ತಿಳಿಸಿದ್ದಾರೆ. ಕವಿ ಸರ್ವಜ್ಞ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸರ್ವಜ್ಞ ಇಂದಿನ ಪೀಳಿಗೆಯ ಉತ್ತಮ ಜೀವನ ನಿರ್ವಹಣೆಗಾಗಿ ಸನ್ಮಾರ್ಗದ ದಾರಿಯನ್ನು ರೂಪಿಸಿದ್ದಾರೆ. ತನ್ನ ಜೀವನ ಅನುಭವದ ಮೂಲಕ ವಚನಗಳನ್ನು ರಚಿಸಿದ್ದಾರೆ. ಸಮಾಜದಲ್ಲಿ ಇದ್ದಂತಹ ಅಂಕುಡೊಂಕುಗಳನ್ನು ತಿದ್ದುವ ಕುರಿತು ಜನಸಾಮಾನ್ಯರಿಗೆ ಅರ್ಥವಾಗುವ ರೀತಿಯಲ್ಲಿ ತ್ರಿಪದಿಗಳ ಮೂಲಕ ವಚನಗಳನ್ನು ರಚಿಸಿದ್ದಾರೆ ಎಂದು ಸ್ಮರಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ<>*><>**